ಆ) ದೊಡ್ಡಬಳ್ಳಾಪುರ ಕರ್ನಾಟಕ ಗೃಹ ನಿರ್ಮಾಣ ಮಂಡಳಿಯಿಂದ ನಿವೇಶನಗಳನ್ನು ವಿತರಿಸುವುದಾಗಿ ಈ ಹಿಂದೆ ಅರ್ಜಿಗಳನ್ನು ಆಹ್ವಾನಿಸಿದ್ದು ಎಷ್ಟು ಅರ್ಜಿಗಳನ್ನು ವಿತರಿಸಲಾಗಿದೆ,

ಇ) ಈ ಪ್ರಕ್ರಿಯೆ ಯಾವ ಹಂತದಲ್ಲಿದೆ?

ಶ್ರೀ ಡಿ ಟಿ ಜಯಕುಮಾರ್ (ವಸತಿ ಸಚಿವರು)

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕರ್ನಾಟಕ ಗೃಹ ನಿರ್ಮಾಣ ಮಂಡಳಿಯಿಂದ ಯಾವುದೇ ಜಮೀನನ್ನು ಭೂ–ಸ್ವಾಧೀನ ಮಾಡಿಕೊಂಡಿರುವುದಿಲ್ಲ

ಆ) ದೊಡ್ಡಬಳ್ಳಾಪುರದಲ್ಲಿ 'ವಸತಿ/ ನಿವೇಶನಗಳಿಗಾಗಿ ಬೇಡಿಕೆಯ ಸಮೀಕ್ಷೆಯನ್ನು ದಿನಾಂಕ 01 08 2006 ರಂದು ಪತ್ರಿಕಾ ಪ್ರಕಟಣೆಯನ್ನು ನೀಡಲಾಗಿದ್ದು ಇದಕ್ಕೆ ಸ್ಪಂದಿಸಿ ಸಾರ್ವಜನಿಕರಿಂದ 5470 ಅರ್ಜಿಗಳು ಸ್ವೀಕೃತವಾಗಿರುತ್ತವೆ

ಇ) ಭೂ–ಸ್ವಾಧೀನ ಪ್ರಕ್ರಿಯೆ ಇನ್ನೂ ಪ್ರಾರಂಭಿಸಿರುವುದಿಲ್ಲ

1026 (1281) ಶ್ರೀ ನಿರಾಣಿ ಮುರುಗೇಶ್ ರುದ್ರಪ್ಪ (ಬೀಳಗಿ) ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕು ಅತ್ಯಂತ ಹಿಂದುಳಿದಿದ್ದು (ಶೈಕ್ಷಣಿಕವಾಗಿ) ಯಾವುದೇ ವೃತ್ತಿಪರ–ಹಾಗೂ ತಾಂತ್ರಿಕ ವಿದ್ಯಾಲಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಯಾವ ಯಾವ ವೃತ್ತಿಪರ–ಕೋರ್ಸ್‌ನ್ನು ಮಂಜೂರು ಮಾಡಲಾಗುತ್ತಿದೆ,

ಇ) ಹಾಗಿದ್ದಲ್ಲಿ ಎಷ್ಟು ಪ್ರಸ್ತಾವನೆಗಳು ಸರ್ಕಾರದ ಮುಂದಿದೆ, (ಬೀಳಗಿ ತಾಲ್ಲೂಕಿಗೆ ಸಂಬಂಧಿಸಿದಂತೆ ವಿವರ ಒದಗಿಸುವುದು)

ಈ) ಇವುಗಳನ್ನು ಶೈಕ್ಷಣಿಕ ವರ್ಷದಲ್ಲೆ ಮಂಜೂರಾತಿ ಕೊಡಲಾಗುವುದೇ?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ) ಬೀಳಗಿ ಭಾಗದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇಲ್ಲ

ಇ) 16, ಬೀಳಗಿ ಭಾಗದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭಿಸುವ ಪ್ರಸ್ತಾವನೆ ಇರುವುದಿಲ್ಲ

ಈ) ಈಗಾಗಲೇ ಎ ಐ ಸಿ ಟಿ ಇ ನವದೆಹಲಿ ಯು 5 ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು 2002–03ನೇ ಸಾಲಿನಲ್ಲಿಯೇ ಮಂಜೂರಾತಿ ನೀಡಿದ್ದು, ಆಯವ್ಯಯದ ಕೊರತೆಯಿಂದಾಗಿ ಅವುಗಳನ್ನು ಪ್ರಾರಂಭಿಸಿರುವುದಿಲ್ಲ, 2007–08ನೇ ಸಾಲಿನಲ್ಲಿ ಈಗಾಗಲೇ ಎ ಐ ಸಿ ಟಿ ಇ ಯಿಂದ ಮಂಜೂರಾಗಿರುವ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಆಯವ್ಯಯದ ಅವಕಾಶವನ್ನು ಮಾಡಿಕೊಂಡು ನಂತರ ಹೊಸ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಲಭ್ಯವಿರುವ ಅನುದಾನದಲ್ಲಿ ಅವಕಾಶ ಮಾಡಿಕೊಳ್ಳಲು ಪರಿಶೀಲಿಸಲಾಗುವುದು

1027 (1282) ಶ್ರೀ ನಿರಾಣಿ ಮುರುಗೇಶ್ ರುದ್ರಪ್ಪ (ಬೀಳಗಿ): ಮಾನ್ಯ ಜಲಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಬೀಳಗಿ ಮತಕ್ಷೇತ್ರ ವ್ಯಾಪ್ತಿಗೆ ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಒಟ್ಟು ಎಷ್ಟು ಟಿ ಎಂ ಸಿ ಪ್ರಮಾಣದಲ್ಲಿ ನೀರು ಲಭ್ಯವಾಗುತ್ತಿದೆ,

ಆ) ಹೆರಕಲ್ಲ ಯೋಜನೆಗೆ ಹೆಚ್ಚುವರಿಯಾಗಿ 9 ಟಿ ಎಂ ಸಿ ಪ್ರಮಾಣದಲ್ಲಿ ನೀರು ಹಂಚಿಕೆಯಾಗಿದೆಯೇ,

ಇ) ಹಾಗಿಲ್ಲದಿದ್ದಲ್ಲಿ, ಈ ಬಗ್ಗೆ ಕೈಕೊಳ್ಳುವ ಕ್ರಮವೇನು,

ಈ) ಹೆರಕಲ್ಲ ಗ್ರಾಮದ ವ್ಯಾಪ್ತಿಗೆ ಬರುವ ಹೊಸ ಬ್ರಿಡ್ಜ್–ಕಂ–ಬ್ಯಾರೇಜ್ ನಿರ್ಮಿಸುವ ಪ್ರಸ್ತಾವನೆ ಈಗ ಯಾವ ಹಂತದಲ್ಲಿದೆ?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಬೀಳಗಿ ಮತಕ್ಷೇತ್ರದ ವ್ಯಾಪ್ತಿಗೆ ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ಯಾವುದೇ ನೀರಾವರಿ ಯೋಜನೆ